**All India Radio: Bangalore**
**Regional Bulletin In Kannada**
**08.03.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**08.03.2026 / 2.30 p.m.**
**<><><><>**

ಮುಖ್ಯಾಂಶಗಳು

1. ನಾಡಿನಾದ್ಯಂತ ಅಂತಾರಾಷ್ಟ್ರೀಯ ಮಹಿಳಾ ದಿನ ಆಚರಣೆ; ಮಹಿಳೆಯರ ತ್ಯಾಗ, ಸೇವೆ ಮತ್ತು ಸಮರ್ಪಣೆ ಸ್ಮರಿಸಲು ಮುಖ್ಯಮಂತ್ರಿ ಕರೆ
2. ಯಲ್ಲಾಪುರ-ಬಾಳೆಗುಳಿ ಮೂಲಕ ಕರಾವಳಿ ಭಾಗ ಸಂಪರ್ಕಿಸುವ ರಾಷ್ಟ್ರೀಯ ಹೆದ್ದಾರಿ ೫೨ರ ಸುಧಾರಣೆಗೆ ಕೇಂದ್ರ ಸರ್ಕಾರದಿಂದ ೧೦೧ ಕೋಟಿ ರೂಪಾಯಿ ಅನುದಾನ ಬಿಡುಗಡೆ
3. ಬೆಳಗಾವಿಯ ಶಾಂತಾಯಿ ವೃದ್ಧಾಶ್ರಮದ ಸುಮನ್, ಫಿಟ್ ಇಂಡಿಯಾ ಸ್ಕೈಕ್ಲಿಂಗ್ ರಾಯಭಾರಿಯಾಗಿ ಆಯ್ಕೆ
4. ಮಕ್ಕಳ ಬೌದ್ಧಿಕ, ಮಾನಸಿಕ ಹಾಗೂ ದೈಹಿಕ ಬೆಳವಣಿಗೆಗೆ ಅಂಗನವಾಡಿ ಕೇಂದ್ರಗಳು ಪೂರಕ - ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರು

<><><><>

ಇಂದು ನಾಡಿನಾದ್ಯಂತ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯ ಸಂಭ್ರಮ ಮನೆಮಾಡಿದೆ. "ಎಲ್ಲಾ ಮಹಿಳೆಯರು ಮತ್ತು ಬಾಲಕಿಯರಿಗಾಗಿ ಹಕ್ಕುಗಳು, ನ್ಯಾಯ ಮತ್ತು ಕ್ರಮ" ಎಂಬುದು ಈ ವರ್ಷದ ಜಾಗತಿಕ ಘೋಷವಾಕ್ಯವಾಗಿದೆ. ಪ್ರತಿಯೊಬ್ಬ ಮಹಿಳೆಗೆ ಸಮಾನತೆ, ಸುರಕ್ಷತೆ ಮತ್ತು ನ್ಯಾಯದ ಲಭ್ಯತೆಯನ್ನು ಖಚಿತಪಡಿಸುವ ನಿಟ್ಟಿನಲ್ಲಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧೆಡೆ ಸಾಧಕ ಮಹಿಳೆಯರಿಗೆ ಸನ್ಮಾನ ಮತ್ತು ಜಾಗೃತಿ ಜಾಥಾಗಳು ನಡೆಯುತ್ತಿದ್ದು, ಸಮಾಜದ ಸರ್ವತೋಮುಖ ಪ್ರಗತಿಯಲ್ಲಿ ಮಹಿಳೆಯರ ಪಾತ್ರವನ್ನು ಈ ದಿನ ಸ್ಮರಿಸಲಾಗುತ್ತಿದೆ. ಅಂತಾರಾಷ್ಟ್ರೀಯ ಮಹಿಳಾ ದಿನದ ಅಂಗವಾಗಿ ನಾಡಿನ ಜನತೆಗೆ ವಿಶೇಷವಾಗಿ ಮಹಿಳಾ ವರ್ಗಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಶುಭಾಶಯ ತಿಳಿಸಿದ್ದಾರೆ. ಮಹಿಳೆಯರ ತ್ಯಾಗ, ಸೇವೆ, ಸಮರ್ಪಣೆಯನ್ನು ಈ ದಿನದಂದು ಸ್ಮರಿಸಿ

ಅವರನ್ನು ಗೌರವಿಸಬೇಕಿರುವುದು ನಮ್ಮೆಲ್ಲರ ಕರ್ತವ್ಯ ಎಂದು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ರಾಜ್ಯದಲ್ಲಿ ಗೃಹಲಕ್ಷ್ಮಿ ಮತ್ತು ಶಕ್ತಿಯೋಜನೆಯಂತಹ ಗ್ಯಾರಂಟಿ ಯೋಜನೆಗಳು ಮಹಿಳೆಯರಿಗೆ ಆರ್ಥಿಕ ಬೆಂಬಲ, ಸಂಚಾರ ಸುಲಭತೆ ಮತ್ತು ಶಿಕ್ಷಣ, ಉದ್ಯೋಗ ಮತ್ತು ಅವಕಾಶಗಳಿಗೆ ಪ್ರವೇಶ ನೀಡಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಂತಾರಾಷ್ಟ್ರೀಯ ಮಹಿಳಾ ದಿನದ ಸಂದರ್ಭದಲ್ಲಿ ತಿಳಿಸಿದ್ದಾರೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಶುಭಾಶಯ ಕೋರಿದ್ದಾರೆ. ಸೃಷ್ಟಿಯ ಮೂಲವೇ ಹೆಣ್ಣು, ಪ್ರೀತಿಯ ಪ್ರತಿರೂಪವೇ ಮಹಿಳೆ ಎಂದಿರುವ ಅವರು, ವಿದ್ಯೆ, ಸಂಪತ್ತು, ಶಕ್ತಿ ಎಲ್ಲದರ ಸಂಗಮವಾಗಿ ಬದುಕಿಗೆ ಅರ್ಥ ನೀಡುವ ಪ್ರತಿಯೊಬ್ಬ ಮಹಿಳೆಗೂ ನಮನಗಳು ಎಂದಿದ್ದಾರೆ.

<><><><>

ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಳೆದ ೫೦ ವರ್ಷಗಳಲ್ಲಿ ಮಹಿಳೆಯರು ಸಾಧಿಸಿದ ಪ್ರಗತಿ ಮತ್ತು ಎದುರಿಸುತ್ತಿರುವ ಸವಾಲುಗಳ ಬಗ್ಗೆ ಆತ್ಮಾವಲೋಕನ ಮಾಡಿಕೊಳ್ಳುವ ಸಂದರ್ಭವಾಗಬೇಕೆಂದು ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದರು. ದಾವಣಗೆರೆಯಲ್ಲಿಂದು ಆಯೋಜಿಸಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಬೆಂಗಳೂರಿನ ಭಾರತೀಯ ತೋಟಗಾರಿಕಾ ಸಂಶೋಧನಾ ವತಿಯಿಂದ ಅಂತಾರಾಷ್ಟ್ರೀಯ ಮಹಿಳಾ ದಿನದ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಈ ವೇಳೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಹಿಳಾ ಸಾಧಕಿಯರಿಗೆ ಪ್ರಶಸ್ತಿ ನೀಡಿ, ಗೌರವಿಸಲಾಯಿತು. ಇದರಲ್ಲಿ ವಿಶೇಷವಾಗಿ ಅತ್ಯುತ್ತಮ ಮಹಿಳಾ ಕೃಷಿಕ ಪ್ರಶಸ್ತಿ ಸೇರಿತ್ತು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿದೆಡೆಗಳಲ್ಲಿ ಇಂದು ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಆಚರಿಸಲಾಗುತ್ತಿದೆ. ದೊಡ್ಡಬಳ್ಳಾಪುರದ ಸರಸ್ವತಿ ವಿದ್ಯಾಸಂಸ್ಥೆಯಲ್ಲಿ ಮಹಿಳೆಯರಿಗಾಗಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ಕ್ರೀಡೆಗಳನ್ನು ಏರ್ಪಡಿಸಲಾಗಿತ್ತು. ಮಹಿಳಾ ದಿನಾಚರಣೆಯ ಮಹತ್ವ ಹಾಗೂ ಮಹಿಳೆಯರ ಸ್ಥಾನಮಾನಗಳ ಕುರಿತಾಗಿ ಗಣ್ಯರು ಮಾತನಾಡಿದರು.

<><><><>

ಉತ್ತರ ಕನ್ನಡ ಜಿಲ್ಲೆಯ ಮಲೆನಾಡು ಮತ್ತು ಕರಾವಳಿ ಭಾಗವನ್ನು ಬೆಸೆಯುವ ಪ್ರಮುಖ ರಸ್ತೆಯಾದ ರಾಷ್ಟ್ರೀಯ ಹೆದ್ದಾರಿ ೫೨ರ ವ್ಯಾಪ್ತಿಯಲ್ಲಿ ಬರುವ ಹೊಸಹಳ್ಳಿಯಿಂದ ಯಲ್ಲಾಪುರ ಹಾಗೂ ಮಾಸ್ತಿಕಟ್ಟೆಯಿಂದ ಬಾಳೆಗುಳಿ ವರೆಗಿನ ರಸ್ತೆಗಳ ಸುಧಾರಣೆಗೆ ಕೇಂದ್ರ ಸರ್ಕಾರ ೧೦೧.೨೧ ಕೋಟಿ ರೂಪಾಯಿಗಳ ಬೃಹತ್ ಅನುದಾನವನ್ನು ಬಿಡುಗಡೆ ಮಾಡಿದೆ ಎಂದು ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದ್ದಾರೆ. ಈ ಯೋಜನೆಯಡಿ ಸುಮಾರು ೪೪.೭೪ ಕಿಲೋಮೀಟರ್ ಉದ್ದದ ರಸ್ತೆಯನ್ನು ಅತ್ಯಾಧುನಿಕ ತಂತ್ರಜ್ಞಾನದೊಂದಿಗೆ ಅಭಿವೃದ್ಧಿಪಡಿಸಲಾಗುತ್ತಿದ್ದು, ಇದರಲ್ಲಿ ರಸ್ತೆಯ ಬಲವರ್ಧನೆ ಮತ್ತು ಅಗತ್ಯವಿರುವ ಕಡೆಗಳಲ್ಲಿ ಸಂಪೂರ್ಣ ಪುನರ್ ನಿರ್ಮಾಣ ಕಾರ್ಯಗಳನ್ನು ಕೈಗೆತ್ತಿಕೊಳ್ಳಲಾಗುವುದು. ಈ ಕಾಮಗಾರಿಯನ್ನು ಅತ್ಯಂತ ವೇಗವಾಗಿ ಮುಂದಿನ ೧೧ ತಿಂಗಳ ಒಳಗೆ ಪೂರ್ಣಗೊಳಿಸಲು ಗುರಿ ನಿಗದಿಪಡಿಸಲಾಗಿದ್ದು, ಕಾಮಗಾರಿ ಮುಗಿದ ನಂತರವೂ ಐದು ವರ್ಷಗಳ ಕಾಲ ಗುತ್ತಿಗೆದಾರರೇ ರಸ್ತೆಯ ನಿರ್ವಹಣೆಯನ್ನು ನೋಡಿಕೊಳ್ಳುವಂತೆ ಕಟ್ಟುನಿಟ್ಟಿನ ನಿಯಮ ರೂಪಿಸಲಾಗಿದೆ ಎಂದು ಸಂಸದರು ತಿಳಿಸಿದ್ದಾರೆ.

<><><><>

ಸೀಬರ್ಡ್ ನೌಕಾನಲೆ ಯೋಜನೆಗೆ ಭೂ ಸ್ವಾದೀನಪಡಿಸಿಕೊಂಡ ೧೧೨ ಪ್ರಕರಣಗಳಿಗೆ ಒಟ್ಟು ೨೭.೭೦ ಕೋಟಿ ರೂಪಾಯಿಗಳ ಹೆಚ್ಚುವರಿ ಪರಿಹಾರವನ್ನು ಬಿಡುಗಡೆಗೊಳಿಸಿದ್ದು, ಇವುಗಳಲ್ಲಿ ಅಗತ್ಯ ದಾಖಲೆಗಳನ್ನು ಒದಗಿಸಿದ ೩೫ ಪ್ರಕರಣಗಳಲ್ಲಿನ ಫಲಾನುಭವಿಗಳಿಗೆ ೬.೮೭ ಕೋಟಿ ರೂಪಾಯಿ ಪರಿಹಾರವನ್ನು ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಕಾರವಾರದ ಜಿಲ್ಲಾಧಿಕಾರಿ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ವಿತರಿಸಿದರು. ನಂತರ ಮಾತನಾಡಿದ ಅವರು ಸೀಬರ್ಡ್ ನೌಕಾನಲೆ ಯೋಜನೆಗೆ ಭೂ ಸ್ವಾದೀನಪಡಿಸಿಕೊಂಡ ಪ್ರಕರಣಗಳಿಗೆ ಸಂಬಂಧಿಸಿದಂತೆ ಬಾಕಿ ಪರಿಹಾರದ ಮೊತ್ತದ ಪಾವತಿಗೆ ಸಂಬಂಧಿಸಿದ ಸಮಸ್ಯೆಗಳ ಕುರಿತು ಕೇಂದ್ರ ರಕ್ಷಣಾ ಸಚಿವರಿಗೆ ಮನವಿಯನ್ನು ಸಲ್ಲಿಸಿದ್ದು, ಅದರಂತೆ ಇದಕ್ಕಾಗಿ ವಿಶೇಷ ಅಧಿಕಾರಿಯನ್ನು ಸಚಿವರು ನೇಮಕ ಮಾಡಿದ ನಂತರ ಪರಿಹಾರದ ಮೊತ್ತ ಬಿಡುಗಡೆ ಕಾರ್ಯ ಶೀಘ್ರಗೊಂಡಿದ್ದು, ಇದುವರೆಗೆ ೩೫ ಕೋಟಿ ರೂಪಾಯಿ ಬಿಡುಗಡೆಗೊಂಡಿದೆ. ಬಾಕಿ ಉಳಿದಿರುವ ೨೧೫ ಪ್ರಕರಣಗಳಿಗೆ ಬಿಡುಗಡೆಯಗಬೇಕಾದ ೨೮.೮೨ ಕೋಟಿ ರೂಪಾಯಿ ಮೊತ್ತ ಕೂಡಾ ತ್ವರಿತಗತಿಯಲ್ಲಿ

ಬಿಡುಗಡೆಗೊಳ್ಳಲಿದೆ ಎಂದರು. ಇದೇ ವೇಳೆ ಭೂ ಸ್ವಾದೀನ ಸಂತ್ರಸ್ಥರ ಬ್ಯಾಂಕ್ ಖಾತೆಗಳಿಗೆ ನೇರವಾಗಿ ಆನ್ ಲೈನ್ ಮೂಲಕ ಪರಿಹಾರದ ಮೊತ್ತವನ್ನು ಜಮೆ ಮಾಡಲಾಯಿತು.

<><><><>

ಬೆಳಗಾವಿಯ ಶಾಂತಾಯಿ ವೃದ್ಧಾಶ್ರಮಕ್ಕೆ ಕೇಂದ್ರ ಸರ್ಕಾರದ 'ಫಿಟ್ ಇಂಡಿಯಾ ಸೈಕ್ಲಿಂಗ್ ರಾಯಭಾರಿಯ' ರಾಷ್ಟ್ರೀಯ ಗೌರವ ಲಭಿಸಿದೆ. ಶಾಂತಾಯಿ ವೃದ್ಧಾಶ್ರಮ ಕಳೆದ ೨೭ ವರ್ಷಗಳಿಂದ ಅನಾಥ ವಯೋವೃದ್ಧರನ್ನು  ಆರೈಕೆ ಮಾಡುತ್ತಿದೆ. ಆಶ್ರಮದ ೭೯ ವಯಸ್ಸಿನ ಸುಮನ್ ಅವರನ್ನು ಕೇಂದ್ರ ಸರ್ಕಾರದ ಯುವ ವ್ಯವಹಾರ ಮತ್ತು ಕ್ರೀಡಾ ಸಚಿವಾಲಯ ೧ ವರ್ಷದವರೆಗೆ ಫಿಟ್ ಇಂಡಿಯಾ ಸೈಕ್ಲಿಂಗ್ ರಾಯಭಾರಿ ಆಗಿ ಆಯ್ಕೆ ಮಾಡಿದೆ. ಶಾಂತಾಯಿ ವೃದ್ಧಾಶ್ರಮದಲ್ಲಿ ಅನಾಥ ವೃದ್ಧರಿಗೆ ಮನೆಯ ವಾತಾವರಣ ಕಲ್ಪಿಸಲಾಗಿದೆ. ದಿನನಿತ್ಯದ ಕೆಲಸ ಕಾರ್ಯಗಳ ಜೊತೆಗೆ ಯೋಗ, ದ್ಯಾನ, ವ್ಯಾಯಾಮ ಇನ್ನಿತರ ಚಟುವಟಿಕೆಗಳಲ್ಲಿ ತೊಡಗಿಸಲಾಗುತ್ತಿದೆ. ಜೊತೆಗೆ ವೃದ್ಧರು ಲವಲವಿಕೆಯಿಂದ ಇರಲು ನಾಟ್ಯ, ಗಾಯನ, ನೃತ್ಯ ತರಬೇತಿ ನೀಡುವ ಮೂಲಕ ಸಾಮಾಜಿಕ ಜಾಲತಾಣಗಳಲ್ಲಿ ಪ್ರಚುರಪಡಿಸಲಾಗುತ್ತಿದೆ. ಆಕಾಶವಾಣಿಯೊಂದಿಗೆ ಸಂತಸ ಹಂಚಿಕೊಂಡಿರುವ ಫಿಟ್ ಇಂಡಿಯಾ ಸೈಕ್ಲಿಂಗ್ ರಾಯಭಾರಿ ಸುಮನ್, ಸಾಂಸ್ಕೃತಿಕ ತರಬೇತಿ ನೀಡಿ ಪ್ರದರ್ಶನ ಮಾಡಿದ್ದರಿಂದ ಸೈಕ್ಲಿಂಗ್ ಅಂಬಾಸಿಡರ್ ಆಗಿ ಆಯ್ಕೆಯಾಗಿರುವುದು ಸಂತಸವಾಗಿದೆ ಎಂದರು. ಶಾಂತಾಯಿ ವೃದ್ಧಾಶ್ರಮದ ಕಾರ್ಯಧ್ಯಕ್ಷ ವಿಜಯ ಮೋರೆ, ಕಳೆದ ೨೭ ವರ್ಷಗಳಿಂದ ಆಶ್ರಮ ನಡೆಸುತ್ತಿದ್ದು, ೩೦೦ ಕ್ಕೂ ಹೆಚ್ಚು ಹಿರಿಯನಾಗರಿಕರಿಗೆ ಆಶ್ರಯ ನೀಡಲಾಗಿದೆ. ಕೇಂದ್ರ ಸರ್ಕಾರ ಆಶ್ರಮವನ್ನು ಗುರುತಿಸಿ ಫಿಟ್ ಇಂಡಿಯಾ ಸೈಕ್ಲಿಂಗ್ ರಾಯಭಾರಿ ಗೌರವ ನೀಡಿರುವುದು ಹೆಮ್ಮೆಯ ಸಂಗತಿ ಎಂದರು.

<><><><>

ಮಕ್ಕಳ ಬೌದ್ಧಿಕ, ಮಾನಸಿಕ ಹಾಗೂ ದೈಹಿಕ ಬೆಳವಣಿಗೆ ಮತ್ತು ಆರೋಗ್ಯ ಸ್ಥಿತಿಗತಿಗಳನ್ನು ಬಾಲ್ಯದಲ್ಲೇ ಅರಿಯಲು ಅಂಗನವಾಡಿ ಕೇಂದ್ರಗಳಲ್ಲಿ ದಾಖಲಿಸುವುದು ಅಗತ್ಯ ಎಂದು ಯಾದಗಿರಿ ಶಾಸಕ ಚೆನ್ನಾರೆಡ್ಡಿ ಪಾಟೀಲ್ ತುನ್ನೂರು ಹೇಳಿದ್ದಾರೆ. ಯಾದಗಿರಿ ಜಿಲ್ಲೆಯ ವಡಗೇರಾ ತಾಲ್ಲೂಕಿನ ಕುರಕುಂದಾ ಗ್ರಾಮದಲ್ಲಿ ಆಯೋಜಿಸಿದ್ದ ಬಾಲಮೇಳ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, 'ನಲಿಯುತ್ತಾ ಕಲಿ' ಎಂಬ ವಾಕ್ಯದಂತೆ ಅಂಗನವಾಡಿ ಮಕ್ಕಳಿಗಾಗಿ ಬಾಲಮೇಳ ಕಾರ್ಯಕ್ರಮಗಳನ್ನು ಆಯೋಜಿಸುವುದು ಪ್ರಶಂಸನೀಯವಾಗಿದೆ ಎಂದು ಹೇಳಿದರು.

ಅಂಗನವಾಡಿ ಕೇಂದ್ರಗಳಲ್ಲಿ ಮಗುವಿಗೆ ಹಾಗೂ ತಾಯಂದಿರಿಗೆ ದೊರೆಯುವ ವಿವಿಧ ಸೌಲಭ್ಯಗಳ ಬಗ್ಗೆ ಅರಿವು ಮೂಡಿಸುವುದಲ್ಲದೆ, ಮಕ್ಕಳಲ್ಲಿ ಅಡಗಿರುವ ಸುಪ್ತ ಪ್ರತಿಭೆಯನ್ನು ಗುರುತಿಸಲು ಈ ರೀತಿಯ ಕಾರ್ಯಕ್ರಮಗಳು ಉಪಯುಕ್ತವಾಗುತ್ತವೆ ಎಂದು ತಿಳಿಸಿದರು. ಈ ವೇಳೆ ಶಾಸಕರು ಕುರಕುಂದಾ ಗ್ರಾಮದ ಹೊರವಲಯದಲ್ಲಿ ನರೇಗಾ ಯೋಜನೆಯಡಿ ನಡೆಯುತ್ತಿರುವ ನಾಲಾ ಹೂಳೆತ್ತುವ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಕೂಲಿ ಕಾರ್ಮಿಕರ ಯೋಗಕ್ಷೇಮ ವಿಚಾರಿಸಿದರು.

<><><><>

ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ -ಎನ್‌ಆರ್‌ಎಲ್‌ಎಂ ಬಡತನ ನಿವಾರಣೆಗೆ ಪ್ರಮುಖ ಕಾರ್ಯಕ್ರಮವಾಗಿದ್ದು, ಗ್ರಾಮೀಣ ಪ್ರದೇಶದ ಬಡ ಕುಟುಂಬಗಳ ಜೀವನಮಟ್ಟವನ್ನು ಸುಧಾರಿಸಲು ಸಹಕಾರಿಯಾಗುತ್ತಿದೆ ಎಂದು ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ ವ್ಯವಸ್ಥಾಪಕ ಪವನ್ ಕುಮಾರ್ ಹೇಳಿದರು. ಯಾದಗಿರಿ ಜಿಲ್ಲೆಯ ವಡಗೇರಾ ತಾಲ್ಲೂಕಿನ ಹಾಲಗೇರಾ ಗ್ರಾಮದಲ್ಲಿ ಆಯೋಜಿಸಿದ್ದ ಶೇಂಗಾ ಹಾಗೂ ತೋಟಗಾರಿಕೆ ಬೆಳೆಗಳ ಕ್ಷೇತ್ರೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬಡವರ, ವಿಶೇಷವಾಗಿ ಮಹಿಳೆಯರ ಸಂಘಗಳನ್ನು ರಚಿಸುವ ಮೂಲಕ ಗ್ರಾಮೀಣ ಬಡತನ ಕಡಿಮೆ ಮಾಡುವುದರ ಜೊತೆಗೆ ಹಣಕಾಸು ಸೇವೆಗಳು ಮತ್ತು ಲಾಭದಾಯಕ ಉದ್ಯೋಗಾವಕಾಶಗಳನ್ನು ಒದಗಿಸಲು ಈ ಕೇಂದ್ರ ಪ್ರಾಯೋಜಿತ ಯೋಜನೆ ನೆರವಾಗುತ್ತಿದೆ ಎಂದು ಹೇಳಿದರು.

<><><><>

ಮಂಡ್ಯ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಎಲ್ಲರೂ ಕೈಜೋಡಿಸಬೇಕು ಎಂದು ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯ ಸ್ವಾಮಿ ತಿಳಿಸಿದರು. ಮಂಡ್ಯ ನಗರದ ಸರ್. ಎಂ. ವಿಶ್ವೇಶ್ವರಯ್ಯ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ "ನಮ್ಮ ನಡೆ ಸ್ವಚ್ಛತೆ ಕಡೆ- ರನ್ ಫಾರ್ ಮಂಡ್ಯ -ಮ್ಯಾರಥಾನ್" ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಮಂಡ್ಯ ಜಿಲ್ಲೆಯ ಅಭಿವೃದ್ಧಿಗೆ ವಿನೂತನ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಜಿಲ್ಲೆಯ ಅಭಿವೃದ್ಧಿಗಾಗಿ ಶ್ರಮಿಸಲಾಗುತ್ತಿದೆ ಎಂದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>